ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಬಗರ್ ಹುಕುಂ ಸಮಿತಿಯ ಕಾರ್ಯ ನಿರ್ವಹಣೆ ಬಗ್ಗೆ

ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):-

404 (410) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕಿನಲ್ಲಿ ಬಗರ್ ಹುಕುಂ ಅರ್ಜಿಗಳ ಬಗ್ಗೆ, ಮೇಲ್ಮನವಿ ಸಲ್ಲಿಸಿ ನ್ಯಾಯಾಲಯಗಳಲ್ಲಿ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಈ ಪ್ರಕರಣಗಳಲ್ಲಿ ನ್ಯಾಯಾಲಯವು ತಾಲ್ಲೂಕು ಮಂಜೂರಾತಿ ಆದೇಶವನ್ನು ರದ್ದುಗೊಳಿಸಿ ಪುನರ್ ಪರಿಶೀಲನೆಗಾಗಿ ಸಮಿತಿಗೆ ವಾಪಸ್ಸು ಕಳುಹಿಸಿದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲು ಮಂಜೂರಾತಿ ಸಮಿತಿ ಕಾರ್ಯನಿರ್ವಹಿಸುತ್ತಿದೆಯೇ ;

(ಇ) ಬಗರ್ ಹುಕುಂ ಸಮಿತಿ ಕಾರ್ಯನಿರ್ವಹಿಸುತ್ತಿಲ್ಲದ ಪಕ್ಷದಲ್ಲಿ ಅಂತಹ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು ?